# ಬೆಳಗಾವಿಯಲ್ಲಿ ಅಧಿವೇಶನ ದಿನಾಂಕ ಶೀಘ್ರ ಪ್ರಕಟಿಸಿ

## 25 ಸದಸ್ಯರ ಅವಧಿ ಶೀಘ್ರ ಮುಕ್ತಾಯ

ಹುಬ್ಬಳ್ಳಿ: ನವೆಂಬರ್ ಅಂತ್ಯ ಅಥವಾ ಡಿಸೆಂಬರ್ ಮೊದಲ ವಾರದಲ್ಲಿ ವಿಧಾನ ಮಂಡಲದ ಚಳಿಗಾಲದ ಅಧಿವೇಶನವನ್ನು ಬೆಳಗಾವಿಯಲ್ಲಿ ನಡೆಸಲು ಮುಖ್ಯಮಂತ್ರಿಗಳಿಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಪತ್ರ ಬರೆದಿದ್ದಾರೆ.

ಈ ಕುರಿತು ಮುಖ್ಯಮಂತ್ರಿಗಳಿಗೆ ಪತ್ರ ಬರೆದಿರುವ ಅವರು, ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ 25 ಸದಸ್ಯರು 2022 ರ ಜನೆವರಿ 5 ರಂದು ಅವಧಿ ಮುಕ್ತಾಯವಾಗಲಿದೆ. ಹೀಗಾಗಿ, ಅದಕ್ಕೂ ಮುನ್ನ ಅಂದರೆ ಜನವರಿ ತಿಂಗಳೊಳಗಡೆ ನವೆಂಬರ್ ಅಥವಾ ಡಿಸೆಂಬರ್ ತಿಂಗಳಲ್ಲಿ ಚಳಿಗಾಲ ಅಧಿವೇಶನ ನಡೆಸಿದರೆ ಅದರಲ್ಲಿ ಪಾಲ್ಗೊಳ್ಳಿ ಈ 25 ಸದಸ್ಯರಿಗೆ ಅವಕಾಶ ಸಿಗಲಿದೆ. ತಮ್ಮ ಕ್ಷೇತ್ರಕ್ಕೆ ಸಂಬಂಧಿಸಿದ ಸಮಸ್ಯೆ, ಅಭಿವೃದ್ಧಿ ಕೆಲಸ ಕುರಿತು ಚರ್ಚಿಸಿ ಪರಿಹಾರ ಕಂಡುಕೊಳ್ಳಲು ಅವರಿಗೆ ಸಹಾಯವಾಗಬಹುದು ಎಂದು ಪತ್ರದಲ್ಲಿ ಸಭಾಪತಿ ಗಮನ ಸೆಳೆದಿದ್ದಾರೆ.

ವಿಧಾನ ಮಂಡಲದ ಅಧಿವೇಶನ ನಡೆಯುವ ದಿನಾಂಕವನ್ನು ಮೊದಲೇ ಪ್ರಕಟಿಸಬೇಕು ಎಂದು ಮುಖ್ಯಮಂತ್ರಿಯವರಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ.